ಟಿ.ಎಂ. ವಿಜಯ ಭಾಸ್ಕರ್, ಭಾ.ಆ.ಸೇ.
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
T.M. VIJAY BHASKAR, I.A.S.
Additional Chief Secretary to Government

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಅ.ಸ. ಪತ್ರ ಸಂಖ್ಯೆ: ಗ್ರಾಅಪ 266 ಗ್ರಾಪಂಕಾ 2014 ದಿನಾಂಕ: 13-06-2014

ಪ್ರಿಯ ಜಿಲ್ಲಾಧಿಕಾರಿಯವರೇ,

ವಿಷಯ: ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ 1750 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರ ಸಂಖ್ಯೆ: ಇ(3) 131/14-15/PSC ದಿನಾಂಕ:10-06-2014

- - - -

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ 1750 ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಪಟ್ಟಿಯನ್ನು ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಅಂತಿಮ ಆಯ್ಕೆ ಪಟ್ಟಿಯಲ್ಲಿ ವಿವಿಧ ಮೀಸಲಾತಿಯಡಿ ಆಯ್ಕೆ ಹೊಂದಿರುವ ಹಾಗೂ ಸದರಿ ಮೀಸಲಾತಿಯಿಂದ ರಿಯಾಯಿತಿ ಹೊಂದಿರುವ ಅಭ್ಯರ್ಥಿಗಳು ಸಲ್ಲಿಸಿರುವ ಪ್ರಮಾಣ ಪತ್ರಗಳು ಸಿಂಧುವೆ ಎಂಬ ಬಗ್ಗೆ ಸರ್ಕಾರಿ ಅಧಿಸೂಚನೆ ಸಂಖ್ಯೆ: SWL 247 SAD 90, ದಿನಾಂಕ:22-02-1993 ರಲ್ಲಿ ಹೊರಡಿಸಿರುವ ಕರ್ನಾಟಕ ಪ.ಜಾ. /ಪ.ಪಂ. ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಇತ್ಯಾದಿಗಳ ಮೀಸಲಾತಿ) ನಿಯಮ 1992 ರನ್ವಯ ಸಂಬಂಧಪಟ್ಟ ಪ್ರಾಧಿಕಾರದಿಂದ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆದ ನಂತರವೇ ಅಭ್ಯರ್ಥಿಗಳನ್ನು ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಬೇಕಾಗಿರುತ್ತದೆ.

ಆದುದರಿಂದ ಅಭ್ಯರ್ಥಿಗಳು ತಮ್ಮ ಅರ್ಹತೆಗಾಗಿ ಮತ್ತು ಮೀಸಲಾತಿಗಾಗಿ ಸಲ್ಲಿಸಿರುವ ದಾಖಲೆಗಳ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆಯಲು ಕೆಳಕಂಡ ವೇಳಾಪಟ್ಟಿ ಪ್ರಕಾರ ಸಿಂಧುತ್ವ ಪ್ರಮಾಣ ಪತ್ರಗಳನ್ನು ತ್ವರಿತವಾಗಿ ನೀಡಲು ಸಂಬಂಧಿಸಿದ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಕೋರಿದೆ.

ವೇಳಾ ಪಟ್ಟಿ

| ಕ್ರ.ಸಂ. | ದಿನಾಂಕ | ತೆಗೆದುಕೊಳ್ಳಬೇಕಾದ ಕ್ರಮ |
|---|---|---|
| 1 | 16.06.2014 | ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆ ಪಟ್ಟಿಯನ್ನು ಜಿಲ್ಲಾ ಪಂಚಾಯತಿಗಳಿಗೆ ಕಳುಹಿಸಲಾಗಿರುತ್ತದೆ. ಸ್ವೀಕರಿಸಿದ ತಕ್ಷಣ ಸಿಂಧುತ್ವ ಪ್ರಮಾಣ ಪತ್ರ ಪಡೆಯಲು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಇಲಾಖೆಗಳಿಗೆ ಪತ್ರ ಬರೆಯುವುದು. |

ಬಹುಮಹಡಿ ಕಟ್ಟಡ, 3ನೇ ಮಹಡಿ, 3ನೇ ಗೇಟ್, ಬೆಂಗಳೂರು-560 001. M.S. Building, 3rd Floor, Gate No. 3, Bangalore-560 001.
Tel. : 080-2235 3929 / 2203 2446 Fax : 080-2235 3927
e-mail : prsrdpr@karnataka.gov.in / principalsecretaryrdpr@gmail.com Website : www.rdpr.kar.nic.in

| | | |
|---|---|---|
| 2 | 20-06-2014 ರಿಂದ 15-07-2014 ರವರೆಗೆ | ಸಿಂಧುತ್ವ ಪ್ರಮಾಣ ಪತ್ರವನ್ನು ಪಡೆಯಲು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯನ್ನು ನಡೆಸಿ ಸ್ಥಳದಲ್ಲೇ ಸಿಂಧುತ್ವ ಪ್ರಮಾಣ ಪತ್ರ ಪಡೆಯಲು ಕ್ರಮ ವಹಿಸುವುದು. ಅಂತಿಮ ದಿನಾಂಕವನ್ನು ಅಗತ್ಯವಿದ್ದಲ್ಲಿ ದಿನಾಂಕ: 15.07.2014 ರವರೆಗೆ ವಿಸ್ತರಿಸುವುದು. |
| 3 | 16.07.2014 ಮತ್ತು 20.07.2014 | ಎಲ್ಲಾ ದಾಖಲಾತಿಗಳ ಅಂತಿಮ ಪರಿಶೀಲನೆ |
| 4 | 25.07.2014 | ಏಕ ಕಾಲದಲ್ಲಿ ಎಲ್ಲಾ ಜಿಲ್ಲಾ ಪಂಚಾಯಿತಿಗಳು ನೇಮಕಾತಿ ಆದೇಶವನ್ನು ಆಯ್ಕೆಯಾದ ಅಭ್ಯರ್ಥಿಗಳಿಗೆ ಕಳುಹಿಸುವುದು. |
| 5 | 10.08.2014 ರಿಂದ 14.08.2014 ರವರೆಗೆ | ಆಯ್ಕೆಯಾದ ಅಭ್ಯರ್ಥಿಗಳಿಗೆ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ವರದಿ ಮಾಡಿಕೊಳ್ಳಲು ಆದೇಶಿಸುವುದು. |

ಆದರಗಳೊಂದಿಗೆ,

ತಮ್ಮ ವಿಶ್ವಾಸಿ,
(ಸಹಿ/-)

ಎಲ್ಲಾ ಜಿಲ್ಲಾಧಿಕಾರಿಗಳು.

<u>ಪ್ರತಿ:</u>

ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

(ಟಿ.ಎಂ. ವಿಜಯ ಭಾಸ್ಕರ್)